ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೭

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೊಂಬತ್ತನೇ ಅಧಿವೇಶನ

## ಮಂಗಳವಾರ, ದಿನಾಂಕ: ೨೧ನೇ ಜುಲೈ, ೨೦೧೫

---

### ಸಮೂಹ – II

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

### ಕಾಸ್ಕಾರ್ಡ್ (KSCARD) ಬ್ಯಾಂಕಿನ ಸೌಲಭ್ಯ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೨೪೧ (೨೦೧೨) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾಸ್ಕಾರ್ಡ್ ಬ್ಯಾಂಕ್ ನಬಾರ್ಡ್‌ನಿಂದ ಇಲ್ಲಿಯವರೆಗೆ ಎಷ್ಟು ಹಣವನ್ನು ಸಾಲವಾಗಿ ಪಡೆದಿದೆ;

(ಆ) ಪಡೆದಿರುವ ಸಾಲಕ್ಕೆ ನಬಾರ್ಡ್‌ನವರು ವಿಧಿಸಿರುವ ಬಡ್ಡಿ ಎಷ್ಟು;

(ಇ) ನಬಾರ್ಡ್‌ನಿಂದ ಪಡೆದ ಹಣವನ್ನು ಪಿ.ಎಲ್.ಡಿ. ಬ್ಯಾಂಕ್‌ಗಳಿಗೆ ರೈತರಿಗೆ ಸಾಲ ನೀಡಲು ನೀಡುತ್ತಿರುವುದು ನಿಜವೇ;

(ಈ) ಹಾಗಾದರೆ, ಪಿ.ಎಲ್.ಡಿ. ಬ್ಯಾಂಕುಗಳು ರೈತರಿಂದ ಶೇ. ಎಷ್ಟು ಬಡ್ಡಿ ವಸೂಲಿ ಮಾಡುತ್ತಿವೆ;

(ಉ) ವಸೂಲಿ ಮಾಡಿದ ಬಡ್ಡಿಯಲ್ಲಿ ಶೇಕಡಾವಾರು ಎಷ್ಟು ಪರ್ಸೆಂಟ್ ಕಾಸ್ಕಾರ್ಡ್ ಬ್ಯಾಂಕಿಗೆ ಪಾವತಿಸಲಾಗುವುದು;

(ಊ) ಪಿ.ಎಲ್.ಡಿ. ಬ್ಯಾಂಕ್‌ಗಳು ವಸೂಲಿ ಮಾಡಿದ ಬಡ್ಡಿಯಲ್ಲಿ ಶೇಕಡಾವಾರು ಎಷ್ಟು ಪರ್ಸೆಂಟ್ ಕಾಸ್ಕಾರ್ಡ್ ಬ್ಯಾಂಕಿನಿಂದ ಪಡೆಯುತ್ತಾರೆ;

(ಋ) ಪಿ.ಎಲ್.ಡಿ. ಬ್ಯಾಂಕಿನವರು, ಕಾಸ್ಕಾರ್ಡ್ ಬ್ಯಾಂಕಿಗೆ ಸಾಲ ವಸೂಲಾತಿಯ ಜವಾಬ್ದಾರರೇ?

## ಕಲಬುರಗಿ ಜಿಲ್ಲೆಯ ವಿವಿಧ ಕೃಷಿ ಮಾರುಕಟ್ಟೆಗಳ ಕುರಿತು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೨ (೨೦೫೧) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಕೃಷಿ ಮಾರುಕಟ್ಟೆಗಳ ಸಂಖ್ಯೆ ಎಷ್ಟು;

(ಆ) ವಿವಿಧ ಕೃಷಿ ಮಾರುಕಟ್ಟೆಗಳಲ್ಲಿ ರೈತರಿಂದ ವಸೂಲಾಗುತ್ತಿರುವ ಮಾರುಕಟ್ಟೆ ಶುಲ್ಕ ಎಷ್ಟು; (ಮಾರುಕಟ್ಟೆವಾರು ವಿವರ ನೀಡುವುದು)

(ಇ) ೨೦೧೪–೧೫ನೇ ಸಾಲಿನಲ್ಲಿ ಈ ಎರಡು ಜಿಲ್ಲೆಗೆ ನಬಾರ್ಡ್ ಯೋಜನೆ ಅಡಿಯಲ್ಲಿ ಜಿಲ್ಲೆಯ ವಿವಿಧ ಮಾರುಕಟ್ಟೆಗಳಿಗೆ ಮಂಜೂರಾಗಿರುವ ಅನುದಾನ ಎಷ್ಟು?

## ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಪಡೆದಿರುವ ಅನುದಾನ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ)–**

೨೪೩ (೧೯೯೮) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩–೧೪ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ೧೩ನೇ ಹಣಕಾಸು ಆಯೋಗದಿಂದ ರಾಜ್ಯ ಸರ್ಕಾರಕ್ಕೆ ಬಂದ ಅನುದಾನದಲ್ಲಿ ರಾಜ್ಯದ ಯಾವ ಯಾವ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು (ಸಿ.ಎಂ.ಸಿ., ಟಿ.ಎಂ.ಸಿ., ಟಿ.ಪಿ.ಎಸ್.) ಎಷ್ಟೆಷ್ಟು ಹಣ ಪಡೆದಿವೆ;

(ಆ) ಪಡೆದಂತಹ ಹಣವನ್ನು ಯಾವ ಯಾವ ಉದ್ದೇಶಗಳಿಗೆ ಮತ್ತು ಕಾಮಗಾರಿಗಳಿಗೆ ಉಪಯೋಗಿಸಲು ಅವಕಾಶವಿದೆ? (ಸಂಕ್ಷಿಪ್ತ ವಿವರ ನೀಡುವುದು)

## ಐ.ಟಿ.ಐ. ಗೃಹ ನಿರ್ಮಾಣ ಸಹಕಾರ ಸಂಘದಲ್ಲಿ ನಿವೇಶನ ಹಂಚಿಕೆ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೨೪೪ (೧೯೭೫+೧೯೭೬+೧೯೭೭+೧೯೭೮) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಐ.ಟಿ.ಐ. ಗೃಹ ನಿರ್ಮಾಣ ಸಹಕಾರ ಸಂಘದ ವತಿಯಿಂದ ಮಲ್ಲತಹಳ್ಳಿ ಬಡಾವಣೆಯ ಸರ್ವೆ ನಂ. ೧೦/೧, ೬/೧, ೧೨ ಮತ್ತು ೧೩ರ ಬಡಾವಣೆಯ ನಕ್ಷೆಯ ಪ್ರತಿಯನ್ನು ಒದಗಿಸುವುದು; ಬಡಾವಣೆ ಮಾಡುವ ಮುನ್ನ ಸಂಬಂಧಿಸಿದ ಪ್ರತಿ ಇಲಾಖೆಗಳಿಂದ ಅನುಮತಿ ಪಡೆಯಲಾಗಿದೆಯೇ; (ಪಡೆದಿದ್ದಲ್ಲಿ, ಪತ್ರದ ದಾಖಲೆಗಳನ್ನು ಒದಗಿಸುವುದು)

(ಆ) ಸಹಕಾರ ಸಂಘದ ವತಿಯಿಂದ, ಮಲ್ಲತ್ತಹಳ್ಳಿ ಬಡಾವಣೆಯಲ್ಲಿ ನಿವೇಶನಗಳನ್ನು ಕೋರಿದವರಿಗೆ ಹಂಚಿಕೆ ಮಾಡಿರುವ ನಿವೇಶನಗಳನ್ನು ಹಿರಿಯ ಸದಸ್ಯತ್ವದ ಪ್ರಕಾರ ಹಂಚಿಕೆ ಮಾಡಲಾಗಿದೆಯೇ; (ದಾಖಲೆಗಳನ್ನು ಒದಗಿಸುವುದು)

(ಇ) ಈ ಸಂಘದ ವತಿಯಿಂದ ಮಲ್ಲತ್ತಹಳ್ಳಿ ಬಡಾವಣೆಯಲ್ಲಿ ಸರ್ವೆ ನಂ. ೧೦/೧ರಲ್ಲಿ ನಿವೇಶನ ಹಂಚಿಕೆ ಮಾಡುವಾಗ ಅನುಸರಿಸಿರುವ ಮಾರ್ಗಸೂಚಿ ಮತ್ತು ಮಾನದಂಡವೇನು; ಅದರಲ್ಲಿ ಸಂಘದ ಸದಸ್ಯರಿಗೆ ಐ.ಟಿ.ಐ. ನೌಕರರಿಗೆ ಹಿರಿಯ ಸದಸ್ಯರಿಗೆ ಮತ್ತು ಖಾಸಗಿಯವರಿಗೆ ಎಷ್ಟೆಷ್ಟು ನಿವೇಶನಗಳನ್ನು ಹಂಚಲಾಗಿದೆ; (ಹೆಸರು ಸಹಿತ ದಾಖಲೆಯ ವಿವರ ಒದಗಿಸುವುದು)

(ಈ) ಅಲ್ಲದೆ, ಸಾಮಾನ್ಯ ವರ್ಗ, ಹಿಂದುಳಿದ ವರ್ಗ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಹಂಚಿಕೆ ಮಾಡಿದ ನಿವೇಶನಗಳ ಸಂಖ್ಯೆ ಎಷ್ಟು; (ಅಂಕಿ ಅಂಶಗಳ ಸಹಿತ ದಾಖಲೆಗಳನ್ನು ಒದಗಿಸುವುದು)

(ಉ) ಐ.ಟಿ.ಐ. ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ವತಿಯಿಂದ ಮಲ್ಲತ್ತಹಳ್ಳಿ ಬಡಾವಣೆಯಲ್ಲಿ ನಿರ್ಮಾಣ ಮಾಡಿ, ಹಂಚಿಕೆ ಮಾಡಿದ ನಿವೇಶನಗಳಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರಿಗೆ ಸರ್ಕಾರದ ಸುತ್ತೋಲೆಯಡಿ ಮೀಸಲಿಡಬೇಕಾದ ಒಟ್ಟು ಸಂಖ್ಯೆ, ಅದರಲ್ಲಿ ಹಂಚಿಕೆ ಮಾಡಿದ ಸಂಖ್ಯೆ ಮತ್ತು ಉಳಿದ ಅಂಕಿ–ಸಂಖ್ಯೆಗಳ ದಾಖಲೆಗಳನ್ನು ಒದಗಿಸುವುದು;

(ಊ) ನಿವೇಶನ ಪಡೆದ ನೌಕರನ ಸದಸ್ಯತ್ವ ಪಡೆದ ದಿನಾಂಕ ಮತ್ತು ಸದಸ್ಯತ್ವ ಪಡೆದ ಗುರುತಿನ ಚೀಟಿಯನ್ನು ಒದಗಿಸುವುದು; ಮತ್ತು ನಿವೇಶನ ಪಡೆಯಲು ಸಲ್ಲಿಸಿದ ಎಲ್ಲಾ ದಾಖಲೆಗಳ ಪ್ರತಿಯನ್ನು ಒದಗಿಸುವುದು?

## ಅಕ್ರಮ–ಸಕ್ರಮ ಯೋಜನೆಯಡಿಯಲ್ಲಿ ರೈತರಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೨೪೫ (೧೯೯೦) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೈತರಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ; (ವಿವರಣೆ ನೀಡುವುದು)

(ಆ) ರಾಜ್ಯದಲ್ಲಿ ಅಕ್ರಮ–ಸಕ್ರಮದ ಯೋಜನೆಯಡಿಯಲ್ಲಿ ಸ್ವೀಕರಿಸಲಾದ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು; ಆ ಪೈಕಿ ಸಕ್ರಮಗೊಳಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; ಸಕ್ರಮಾತಿಗೊಳಿಸಲು ಇರುವ ನಿಯಮಗಳೇನು;

(ಇ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿ "ಶೀಘ್ರ ಸಂಪರ್ಕ ಯೋಜನೆ" ಯಡಿಯಲ್ಲಿ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ; ಆ ಪೈಕಿ ಎಷ್ಟು ಅರ್ಜಿಗಳಿಗೆ ಸಂಪರ್ಕ ಕಲ್ಪಿಸಲಾಗಿದೆ? (ವಿವರ ನೀಡುವುದು)

## ರಾಜ್ಯದಲ್ಲಿ ಅಣು ವಿದ್ಯುತ್ ಯೋಜನೆಯ ಬಗೆ

**ಶ್ರೀ ಅಶ್ವಥ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೪೬ (೧೯೪೬) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಣು ವಿದ್ಯುತ್ ಘಟಕ ಪ್ರಾರಂಭಿಸಲು ಅನುಮತಿ ನೀಡಲಾಗಿದೆಯೇ; ನೀಡಲಾಗಿದ್ದಲ್ಲಿ, ರಾಜ್ಯ ಸರ್ಕಾರ ಅಣು ವಿದ್ಯುತ್ ಘಟಕವನ್ನು ಎಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ; ಘಟಕದ ಪ್ರಾರಂಭ ಯಾವ ಹಂತದಲ್ಲಿದೆ;

(ಆ) ಘಟಕದಲ್ಲಿ ಉತ್ಪತ್ತಿಯಾದ ವಿದ್ಯುತ್‌ನಲ್ಲಿ ರಾಜ್ಯದ ಪಾಲೆಷ್ಟು; ಪ್ರಾರಂಭವಾಗಿದ್ದರೆ, ರಾಜ್ಯಕ್ಕೆ ಬರುವ ಪಾಲಿನಲ್ಲಿ ಯಾವ ಯಾವ ಜಿಲ್ಲೆಗಳಿಗೆ ಎಷ್ಟು ಪ್ರಮಾಣದ ವಿದ್ಯುತ್ ಸರಬರಾಜಾಗುತ್ತಿದೆ? (ವಿವರ ನೀಡುವುದು)

## ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೭ (೧೪೨೨) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು–ಮೈಸೂರು ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿ ವ್ಯಾಪ್ತಿಗೊಳಪಡಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಈ ರಾಷ್ಟ್ರೀಯ ಹೆದ್ದಾರಿ ಕಛೇರಿಯನ್ನು ಎಲ್ಲಿ ಪ್ರಾರಂಭಿಸಲಾಗಿದೆ; (ವಿವರ ನೀಡುವುದು)

(ಇ) ಈ ರಸ್ತೆಯಲ್ಲಿ ಅವೈಜ್ಞಾನಿಕವಾಗಿ ನಿರ್ಮಿಸಲಾಗಿದ್ದ ಉಬ್ಬುಗಳನ್ನು ತೆರವುಗೊಳಿಸಿ, ಮನಃ ನಿರ್ಮಿಸಿರುವುದು ಹಾಗೂ ರಸ್ತೆಯಲ್ಲಿ ಗುಂಡಿಗಳು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು;

(ಈ) ರಸ್ತೆ ಮಧ್ಯ ಭಾಗದಲ್ಲಿ ಬೆಳೆಸಲಾದ ಹಸಿರು ಗಿಡಗಳು ಬೆಳೆದು ಸಂಚಾರಕ್ಕೆ ಅಡ್ಡಿಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)

## ಸರ್ಕಿಟ್ ಹೌಸ್ ಮತ್ತು ಪ್ರವಾಸಿ ಮಂದಿರಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು)**:–

೨೪೪ (೧೯೪೭) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯ ಅಧೀನದಲ್ಲಿರುವ ಸರ್ಕಿಟ್ ಹೌಸ್‌ಗಳು ಮತ್ತು ಪ್ರವಾಸಿ ಮಂದಿರಗಳೆಷ್ಟು; ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು

(ಆ) ಸರ್ಕಿಟ್ ಹೌಸ್ ಮತ್ತು ಪ್ರವಾಸಿ ಮಂದಿರಗಳನ್ನು ನಿರ್ವಹಿಸಲು ಪ್ರತ್ಯೇಕ ನಿಗಮವನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ;

(ಇ) ಪ್ರವಾಸಿ ಮಂದಿರ ನಿರ್ವಹಣೆಯು ತೀರಾ ಕಳಪೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸಿಬ್ಬಂದಿಗಳ ಕೊರತೆಯಿಂದ ನಿರ್ವಹಣೆ ಮಾಡಲು ಸಾಧ್ಯವಿಲ್ಲ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು;

(ಉ) ಪ್ರವಾಸಿ ಮಂದಿರಗಳನ್ನು ಮೇಲ್ದರ್ಜೆಗೇರಿಸುವ ಮತ್ತು ನಿರ್ವಹಣೆಗಾಗಿ ೨೦೧೪–೧೫ನೇ ಸಾಲಿನಲ್ಲಿ ಖರ್ಚು ಮಾಡಿದ ಮೊತ್ತ ಎಷ್ಟು; ಯಾವ ಯಾವ ಜಿಲ್ಲೆಗಳಲ್ಲಿ ಹೊಸ ಪ್ರವಾಸಿ ಮಂದಿರಗಳನ್ನು ನಿರ್ಮಾಣ ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆ? (ವಿವರ ನೀಡುವುದು)

## ನಗರ ಮತ್ತು ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೪೯ (೧೯೬೯) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಯಾವ ಯಾವ ಗ್ರಾಮ ಪಂಚಾಯತ್, ಪಟ್ಟಣ ಪಂಚಾಯತ್ ಮತ್ತು ಪುರಸಭೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ; ಈ ಸಂಬಂಧ ಯಾವಾಗ ಅಧಿಸೂಚನೆ ಹೊರಡಿಸಲಾಗಿದೆ; (ಪ್ರತಿ ಒದಗಿಸುವುದು)

(ಆ) ಪ್ರತಿಯೊಂದು ಸಂಸ್ಥೆಯನ್ನು ಮೇಲ್ದರ್ಜೆಗೇರಿಸಲು ಬೇಕಾಗುವ ಒಟ್ಟಾರೆ ಅನುದಾನ ಎಷ್ಟು;

(ಇ) ಗ್ರಾಮ ಪಂಚಾಯತ್, ಪಟ್ಟಣ ಪಂಚಾಯತ್ ಮತ್ತು ಪುರಸಭೆಗಳನ್ನು ಮೇಲ್ದರ್ಜೆಗೇರಿಸಿದ ನಂತರ ಅಗತ್ಯವಿರುವ ಸಿಬ್ಬಂದಿಗಳ ನೇಮಕಾತಿಯನ್ನು ಮಾಡಲಾಗಿದೆಯೇ; ಇಲ್ಲವಾದಲ್ಲಿ, ಯಾವಾಗ ನೇಮಕ ಮಾಡಲು ಕ್ರಮ ಕೈಗೊಳ್ಳಲಾಗುವುದು;

(ಈ) ಹೊಸ ಪಟ್ಟಣ ಪಂಚಾಯತ್, ಪುರಸಭೆ ಮತ್ತು ನಗರ ಸಭೆಗಳಿಗೆ ಪೂರಕ ಅನುದಾನ, ಕಛೇರಿಗೆ ಮೂಲ ಸೌಕರ್ಯ ಹಾಗೂ ಸಿಬ್ಬಂದಿಗಳನ್ನು ಕೂಡಲೇ ಒದಗಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)

## ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಮಧ್ಯವರ್ತಿಗಳ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೦ (೧೪೨೭) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಮಧ್ಯವರ್ತಿಗಳ ಕಾಟದಿಂದ ರೈತರಿಗೆ ವಂಚನೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಒಟ್ಟು ಎಷ್ಟು ಕೃಷಿ ಉತ್ಪನ್ನ ಮತ್ತು ಉಪಕೃಷಿ ಉತ್ಪನ್ನ ಮಾರುಕಟ್ಟೆಗಳಿವೆ;

(ಇ) ಪ್ರತಿ ವರ್ಷ ಜಿಲ್ಲೆಯ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ವಾರ್ಷಿಕ ವಹಿವಾಟು ಎಷ್ಟು;

(ಈ) ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಮಧ್ಯವರ್ತಿಗಳು ವ್ಯವಹರಿಸಿ ರೈತರಿಂದ ಕಮೀಷನ್ ಪಡೆಯುತ್ತಿರುವ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು;

(ಉ) ಈ ಮಧ್ಯವರ್ತಿಗಳ ಹಾವಳಿ ಕುರಿತು ರೈತರು ಮತ್ತು ಸಾರ್ವಜನಿಕರು ದೂರು ನೀಡಿದ್ದರೂ ಅಧಿಕಾರಿಗಳು ಕ್ರಮ ಕೈಗೊಳ್ಳದಿರಲು ಕಾರಣಗಳೇನು;

(ಊ) ಈ ಮಧ್ಯವರ್ತಿಗಳ ಹಾವಳಿಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ವಿದ್ಯುತ್ ಕೊರತೆ ಎದುರಿಸುತ್ತಿರುವ ಕೈಗಾರಿಕೆಗಳು

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೫೧ (೧೯೪೫) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸಣ್ಣ, ಅತೀ ಸಣ್ಣ, ಮಧ್ಯಮ ಮತ್ತು ಭಾರಿ ಕೈಗಾರಿಕೆಗಳಿಂದ ವಿದ್ಯುತ್‌ಗಾಗಿ ಇರುವ ಬೇಡಿಕೆ ಮತ್ತು ಪೂರೈಕೆಯ ಪ್ರಮಾಣಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಪೂರೈಕೆ ಪಡೆದು, ಲಕ್ಷಕ್ಕೂ ಹೆಚ್ಚು ಮೌಲ್ಯದ ವಿದ್ಯುತ್ ಬಿಲ್ಲುಗಳನ್ನು ಪಾವತಿಸಲು ಬಾಕಿ ಉಳಿಸಿಕೊಂಡಿರುವ ಕೈಗಾರಿಕೆಗಳು ಯಾವುವು; (ಜಿಲ್ಲಾವಾರು, ಕೈಗಾರಿಕೆವಾರು ಬಾಕಿಯ ವಿವರಗಳನ್ನು ನೀಡುವುದು)

(ಇ) ಕೆಲವು ಕೈಗಾರಿಕೆಗಳ ಬೇಡಿಕೆಗಳ ಪ್ರಮಾಣಕ್ಕನುಗುಣವಾಗಿ ವಿದ್ಯುತ್ ಪೂರೈಕೆ ಮಾಡಲು ಸಾಧ್ಯವಾಗದಿರುವುದಕ್ಕೆ ಕಾರಣಗಳೇನು;

(ಈ) ವಿದ್ಯುತ್ ಪೂರೈಕೆ ಕೊರತೆಯ ಕಾರಣ ನೀಡಿ, ಈವರೆಗೆ ಎಷ್ಟು ಕೈಗಾರಿಕೆಗಳು ರಾಜ್ಯದ ಹೊರಗೆ ಹೋಗಿವೆ;

(ಉ) ರಾಜ್ಯದಲ್ಲಿನ ಎಲ್ಲ ರೂಪದ ಕೈಗಾರಿಕೆಗಳ ಬೇಡಿಕೆಗಳ ಪ್ರಮಾಣಕ್ಕನುಗುಣವಾಗಿ ವಿದ್ಯುತ್ ಪೂರೈಕೆ ಮಾಡಲು ಸರ್ಕಾರ ಯಾವ್ಯಾವ ಕ್ರಮಗಳನ್ನು ಕೈಗೊಂಡಿದೆ?

## ಮೈಸೂರು ಕಾಫಿ ಸಂಸ್ಕರಣ ಸಹಕಾರ ಸಂಘ ನಿಯಮಿತದ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)–**

೨೫೨ (೨೦೦೩) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ಕಾಫಿ ಸಂಸ್ಕರಣ ಸಹಕಾರ ಸಂಘ ನಿಯಮಿತ ಯಾವಾಗ ಸ್ಥಾಪನೆಯಾಯಿತು; ಈ ಸಂಘವು ಎಷ್ಟು ವಿಸ್ತೀರ್ಣದ ಪ್ರದೇಶವನ್ನು ಹೊಂದಿರುತ್ತದೆ; ಸದರಿ ಸ್ಥಳದಲ್ಲಿ ಅಭಿವೃದ್ಧಿಪಡಿಸಿರುವ ಕಟ್ಟಡಗಳ ಸಂಖ್ಯೆ ಹಾಗೂ ವಿಸ್ತೀರ್ಣ ಎಷ್ಟು; (ಪೂರ್ಣ ವಿವರ ನೀಡುವುದು)

(ಆ) ಸದರಿ ಸಂಘಕ್ಕೆ ಸಮಾಪನ ಅಧಿಕಾರಿಯನ್ನು ನೇಮಕ ಮಾಡಲಾಗಿದೆಯೇ; ಎಂದಿನಿಂದ ನೇಮಕ ಮಾಡಲಾಗಿದೆ; ನೇಮಕ ಮಾಡಲು ಕಾರಣಗಳೇನು; (ಪೂರ್ಣ ವಿವರ ನೀಡುವುದು)

(ಇ) ಸಮಾಪನ ಅಧಿಕಾರಿಯನ್ನು ನೇಮಕ ಮಾಡಿದ ನಂತರ ಸದರಿ ಸಂಘದ ಆಸ್ತಿಯನ್ನು ಎಷ್ಟು ಬಾರಿ ಯಾವ ಯಾವ ಉದ್ದೇಶಕ್ಕಾಗಿ ಮಾರಾಟ ಮಾಡಲಾಗಿದೆ; (ಪೂರ್ಣ ವಿವರ ನೀಡುವುದು)

(ಈ) ಸಂಘದ ಆಸ್ತಿಯನ್ನು ಮಾರಾಟ ಮಾಡುವಾಗ ಯಾವ ಮಾರ್ಗಸೂಚಿಗಳನ್ನು ಅನುಸರಿಸಲಾಗಿದೆ; ಎಷ್ಟು ಮೊತ್ತಕ್ಕೆ ಮಾರಾಟ ಮಾಡಲಾಗಿದೆ; (ಪೂರ್ಣ ವಿವರ ನೀಡುವುದು)

(ಉ) ಈ ಸಂಘದಲ್ಲಿ ಎಷ್ಟು ಮಂದಿ ನೌಕರರು ನೇಮಕಗೊಂಡು ಎಂದಿನಿಂದ ಕಾರ್ಯನಿರ್ವಹಿಸುತ್ತಿದ್ದಾರೆ; ಇವರಿಗೆ ನಿಗದಿಪಡಿಸಿರುವ ತಲಾ ವೇತನದ ಮೊತ್ತವೆಷ್ಟು; ಹಾಲಿ ಇವರು ಪಡೆಯುತ್ತಿರುವ ವೇತನದ ಮೊತ್ತವೆಷ್ಟು; (ಪೂರ್ಣ ವಿವರ ನೀಡುವುದು)

(ಊ) ಸದರಿ ನೌಕರರಿಗೆ ನೇಮಕಾತಿ ನಿಯಮಾನುಸಾರ ವೇತನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಕೃಷಿ ಇಲಾಖಾ ವತಿಯಿಂದ ಅನುಷ್ಠಾನಗೊಂಡ ಯೋಜನೆಗಳು

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೩ (೧೪೧೭) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಕೃಷಿ ಇಲಾಖಾ ವತಿಯಿಂದ ಅನುಷ್ಠಾನಗೊಂಡ ಯೋಜನೆಗಳಾವುವು; (ವರ್ಷವಾರು ಯೋಜನೆಗಳ ವಿವರ ನೀಡುವುದು)

(ಆ) ಸರ್ಕಾರವು ಈ ಯೋಜನೆಗಳಿಗೆ ನಿಗದಿಪಡಿಸಿದ ವೆಚ್ಚ ಹಾಗೂ ವ್ಯಯ ಮಾಡಿದ ವೆಚ್ಚವೆಷ್ಟು; (ತಾಲ್ಲೂಕುವಾರು, ಯೋಜನಾವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಕೃಷಿ ಇಲಾಖಾ ವತಿಯಿಂದ ನೀಡಿರುವ ಸಾಲ ಹಾಗೂ ಈ ಸಾಲದಲ್ಲಿ ಮರು ಪಾವತಿಯಾದ ಮೊತ್ತವೆಷ್ಟು; ಮನ್ನಾ ಮಾಡಿದ ಸಾಲದ ಮೊತ್ತವೆಷ್ಟು? (ತಾಲ್ಲೂಕುವಾರು ಫಲಾನುಭವಿಗಳ ಪಟ್ಟಿ ಒದಗಿಸುವುದು)

## ಯಶಸ್ವಿನಿ ಆರೋಗ್ಯ ವಿಮಾ ಯೋಜನೆ ಪ್ರಗತಿ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೨೫೪ (೨೦೦೪) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರ "ಯಶಸ್ವಿನಿ ನಗರ ಸಹಕಾರಿಗಳ ಆರೋಗ್ಯ ರಕ್ಷಾ ಯೋಜನೆ"ಯನ್ನು ಜಾರಿ ಮಾಡಿರುವುದು ನಿಜವೇ;

(ಆ) ಹಾಗಿದ್ದರೆ, ಸೌಲಭ್ಯ ಪಡೆಯಲು ಇರುವ ಮಾರ್ಗಸೂಚಿಗಳೇನು; (ವಿವರ ನೀಡುವುದು)

(ಇ) ಇದುವರೆವಿಗೂ ಎಷ್ಟು ಫಲಾನುಭವಿಗಳು ಈ ಸೌಲಭ್ಯ ಪಡೆದಿದ್ದಾರೆ; ಎಷ್ಟು ಹಣ ಖರ್ಚಾಗಿದೆ? (ವಿವರ ನೀಡುವುದು)

## ಅವೈಜ್ಞಾನಿಕವಾಗಿ ನಿರ್ಮಿಸಿರುವ ರಸ್ತೆ ಉಬ್ಬುಗಳನ್ನು ತೆರವುಗೊಳಿಸುವ ಬಗ್ಗೆ

**ಡಾ: ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

***೨೫೫*** (೨೦೧೭) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅವೈಜ್ಞಾನಿಕವಾಗಿ ನಿರ್ಮಿಸಲಾದ ರಸ್ತೆ ಉಬ್ಬುಗಳಿಂದಾಗಿ (Humps) ಅಪಘಾತಗಳು ಉಂಟಾಗುತ್ತಿದ್ದು, ವಾಹನಗಳು ಸಹ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅವೈಜ್ಞಾನಿಕವಾಗಿ ನಿರ್ಮಿಸಲಾದ ರಸ್ತೆ ಉಬ್ಬುಗಳನ್ನು ತೆರವುಗೊಳಿಸುವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;

(ಇ) ಇದೇ ರೀತಿ ರಾಷ್ಟ್ರೀಯ ಹೆದ್ದಾರಿಗಳಲ್ಲಿಯೂ ಸಹ ನಿರ್ಮಿಸಿರುವ ರಸ್ತೆ ಉಬ್ಬುಗಳನ್ನು ತೆರವುಗೊಳಿಸಲಾಗುವುದು ಯಾವಾಗ;

(ಈ) ನಿಯಮಗಳನ್ನು ಉಲ್ಲಂಘಿಸಿ, ಯಾವುದೇ ನಿಯಂತ್ರಣವಿಲ್ಲದೇ ಅವೈಜ್ಞಾನಿಕವಾಗಿ ರಸ್ತೆ ಉಬ್ಬುಗಳನ್ನು ನಿರ್ಮಿಸುವ ಅಧಿಕಾರಿ ನೌಕರರನ್ನು ಶಿಕ್ಷೆಗೆ ಗುರಿಪಡಿಸಲಾಗುವುದೇ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. ಕಾಸೂ 334 – ಪ್ರತಿಗಳು (೩1)